All India Radio: Bangalore

National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

21.03.2025 13.10 P.M.

**<><><><>**

ಮುಖ್ಯಾಂಶಗಳು

- ರೈತರ ಸಮಸ್ಯೆಗಳನ್ನು ಸಂಸತ್ತಿನಲ್ಲಿ ಚರ್ಚಿಸಲು ಕೇಂದ್ರ ಸರ್ಕಾರ ಸಿದ್ಧ - ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್
- ]೨೦೧೫ ರಿಂದ ೨೦೨೩ರವರೆಗೆ ಕ್ಷಯರೋಗ ಪ್ರಮಾಣ ಶೇಕಡ ೧೭.೭ರಷ್ಟು ಇಳಿಕೆ - ಕೇಂದ್ರ ಸರ್ಕಾರ ಮಾಹಿತಿ
- ೨೦೩೦ರ ಶತಾಬ್ದ ಕಾಮನ್‌ವೆಲ್ತ್ ಕ್ರೀಡಾಕೂಟದ ಆತಿಥ್ಯಕ್ಕೆ ಅಧಿಕೃತ ಪ್ರಸ್ತಾವನೆ ಸಲ್ಲಿಸಿದ ಭಾರತ
- ಆರ್‌ಎಸ್‌ಎಸ್‌ನ ಮೂರು ದಿನಗಳ ಅಖಿಲ ಭಾರತೀಯ ಪ್ರತಿನಿಧಿ ಸಭೆಗೆ ಬೆಂಗಳೂರಿನಲ್ಲಿ ಚಾಲನೆ

<><><><>

ವಿರೋಧ ಪಕ್ಷಗಳು ರೈತರ ಶ್ರೇಯೋಭಿವೃದ್ಧಿಗಾಗಿ ಕೈಗೊಳ್ಳುತ್ತಿರುವ ಕೆಲಸವನ್ನು ಮುಂದುವರೆಸಲು ಸಂಸತ್ತಿನಲ್ಲಿ ಕೃಷಿ ಕುರಿತ ಚರ್ಚೆಗೆ ಅನುವು ಮಾಡಿಕೊಡಬೇಕು ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಕೋರಿದ್ದಾರೆ. ಸಂಸತ್ತಿನ ಆವರಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ ರೈತರ ಸಮಸ್ಯೆಗಳನ್ನು ಸಂಸತ್ತಿನಲ್ಲಿ ಚರ್ಚಿಸಲು ಸಿದ್ಧವಿದೆ. ರೈತರ ಕಲ್ಯಾಣ, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರದ ಆದ್ಯತೆಯಾಗಿದೆ.

ಧ್ವನಿ: ಶಿವರಾಜ್ ಸಿಂಗ್ ಚೌಹಾಣ್ ೧೭ ಸೆಕೆಂಡ್‌ಗಳು

<><><><>

ಭಾರತ ಕ್ಷಯಮುಕ್ತ ರಾಷ್ಟ್ರವಾಗುವತ್ತ ವೇಗವಾಗಿ ಸಾಗುತ್ತಿದೆ ಎಂದು ಸರ್ಕಾರ ತಿಳಿಸಿದೆ. ಲೋಕಸಭೆಯಲ್ಲಿಂದು ಪೂರಕ ಪ್ರಶ್ನೆಗಳಿಗೆ ಉತ್ತರಿಸಿದ ಕೇಂದ್ರ ಆರೋಗ್ಯ ಖಾತೆ ರಾಜ್ಯ ಸಚಿವೆ ಅನುಪ್‌ಪ್ರಿಯಾ ಪಟೇಲ್ ದೇಶದಲ್ಲಿ ಕ್ಷಯ ರೋಗದ ಪ್ರಮಾಣ ೨೦೧೫ರಲ್ಲಿ ಪ್ರತಿ ಲಕ್ಷ ಜನಸಂಖ್ಯೆಗೆ ೨೩೭ ರಷ್ಟಿತ್ತು. ಅದು ೨೦೨೩ರಲ್ಲಿ ೧೯೫ಕ್ಕೆ ಇಳಿದಿದ್ದು, ಶೇಕಡ ೧೭.೭ರಷ್ಟು ಇಳಿಕೆ ದಾಖಲಿಸಿದೆ ಎಂದರು. ೨೦೧೫ಕ್ಕೆ ಹೋಲಿಸಿದರೆ, ೨೦೨೩ರಲ್ಲಿ ಕ್ಷಯರೋಗ ಮರಣ ಪ್ರಮಾಣ ಶೇಕಡ ೨೧ರಷ್ಟು ಕಡಿಮೆಯಾಗಿದೆ ಎಂದು ಅವರು ಮಾಹಿತಿ ನೀಡಿದರು.

ಧ್ವನಿ: ಅನುಪ್‌ಪ್ರಿಯಾ ಪಟೇಲ್

<><><><>

ಗುಜರಾತ್‌ನ ಅಹಮಾಬಾದ್‌ನಲ್ಲಿ ೨೦೩೦ರಲ್ಲಿ ಶತಾಬ್ಧ್ ಕಾಮನ್‌ವೆಲ್ತ್ ಕ್ರೀಡಾಕೂಟವನ್ನು ಆಯೋಜಿಸುವ ಕುರಿತ ಪ್ರಸ್ತಾವನೆಯನ್ನು ಇಂದು ಅಧಿಕೃತವಾಗಿ ಸಲ್ಲಿಸಲಾಗಿದೆ. ಭಾರತೀಯ ಕಾಮನ್‌ವೆಲ್ತ್ ಗೇಮ್ಸ್ ಸಂಸ್ಥೆಯ ಅಧ್ಯಕ್ಷೆ ಪಿ.ಟಿ.ಉಷಾ ನೇತೃತ್ವದಲ್ಲಿ ಇಂದು ಪ್ರಸ್ತಾವನೆಯನ್ನು ಸಲ್ಲಿಸಲಾಗಿದ್ದು, ೨೦೩೬ರ ಒಲಿಂಪಿಕ್ ಕ್ರೀಡಾಕೂಟ ಸೇರಿದಂತೆ ಪ್ರಮುಖ ಅಂತಾರಾಷ್ಟ್ರೀಯ ಕ್ರೀಡಾಕೂಟಗಳನ್ನು ಭಾರತದಲ್ಲಿ ಆಯೋಜಿಸುವ ದೃಷ್ಟಿಕೋನಕ್ಕೆ ಇದು ಸಹಕಾರಿಯಾಗಲಿದೆ. ಕಾಮನ್‌ವೆಲ್ತ್ ಕ್ರೀಡಾಕೂಟದ ಆಯೋಜನೆ ಕೇವಲ ಕ್ರೀಡಾ ಆಡಳಿತದಲ್ಲಿ ಭಾರತದ ಸ್ಥಾನಮಾನವನ್ನು ಹೆಚ್ಚಿಸುವುದಲ್ಲದೇ, ಗಮನಾರ್ಹ ಆರ್ಥಿಕ ಲಾಭವನ್ನು ತಂದು ಕೊಡಲಿದೆ. ಕಾಮನ್‌ವೆಲ್ತ್ ಗೇಮ್ಸ್ ಒಕ್ಕೂಟ ಭಾರತದ ಪ್ರಸ್ತಾವನೆಯನ್ನು ಸ್ವೀಕರಿಸಿದೆ ಎಂದು ದೃಢಪಡಿಸಿರುವ ಪಿ.ಟಿ.ಉಷಾ, ಅಹಮಾದಾಬಾದ್ ದೊಡ್ಡ ಮಟ್ಟದ ಕಾರ್ಯಕ್ರಮಗಳನ್ನು ಆಯೋಜಿಸಲು ಯೋಗ್ಯ ನಗರ ಎಂದು ತಿಳಿಸಿದ್ದಾರೆ. ಆರ್ಥಿಕ ಕಾರಣಗಳಿಂದಾಗಿ ಸಿಂಗಾಪುರ ಹಾಗೂ ಮಲೇಷ್ಯಾ ಕ್ರೀಡಾಕೂಟದ ಆತಿಥ್ಯ ವಹಿಸುವ ಕುರಿತಂತೆ ಹಿಂಜರಿದ ಬೆನ್ನಲ್ಲೇ ಭಾರತದ ಈ ಪ್ರಸ್ತಾವನೆಗೆ ಬಲ ಬಂದಂತಾಗಿದೆ.

<><><><>

ಪಿಂಚಣಿ ನಿಧಿ ನಿಯಂತ್ರಣ ಮತ್ತು ಅಭಿವೃದ್ಧಿ ಪ್ರಾಧಿಕಾರ-ಪಿಎಫ್‌ಆರ್‌ಡಿಎ ಏಕೀಕೃತ ಪಿಂಚಣಿ ಯೋಜನೆ ಯುಪಿಎಸ್‌ನ ಅನುಷ್ಠಾನಕ್ಕೆ ನಿಯಮಗಳನ್ನು ಸೂಚಿಸಿದೆ. ಈ ವರ್ಷದ ಜನವರಿಯಲ್ಲಿ ಭಾರತ ಸರ್ಕಾರ ನೂತನ ಪಿಂಚಣಿ ಯೋಜನೆ ವ್ಯಾಪ್ತಿಗೆ ಒಳಪಡುವ ಕೇಂದ್ರ ಸರ್ಕಾರಿ ನೌಕರರಿಗಾಗಿ ಯುಪಿಎಸ್ ಅಧಿಸೂಚನೆಯನ್ನು ಹೊರಡಿಸಿದ ನಂತರ ಈ ಕ್ರಮ ಕೈಗೊಳ್ಳಲಾಗಿದೆ. ಈ ನಿಯಮಗಳು ಮುಂದಿನ ತಿಂಗಳ ೧ ರಿಂದ ಜಾರಿಗೆ ಬರಲಿವೆ. ಈ ನಿಯಮಗಳು ಮೂರು ವರ್ಗದ ಕೇಂದ್ರ ಸರ್ಕಾರಿ ನೌಕರರ ದಾಖಲಾತಿಗೆ ಅನುವು ಮಾಡಿಕೊಡಲಿದೆ. ಮೊದಲ ವರ್ಗ ಏಪ್ರಿಲ್ ೧ ರಂದು ಸೇವೆಯಲ್ಲಿರುವ ಅಸ್ತಿತ್ವದಲ್ಲಿರುವ ಕೇಂದ್ರ ಸರ್ಕಾರಿ ನೌಕರರನ್ನು ಒಳಗೊಂಡಿದೆ, ಎರಡನೇ ವರ್ಗ ಏಪ್ರಿಲ್ ೧ ರಂದು ಮತ್ತು ನಂತರ ಸೇವೆಗೆ ಸೇರುವ ಅಥವಾ ಕೇಂದ್ರ ಸರ್ಕಾರಿ ಸೇವೆಗಳಲ್ಲಿ ಹೊಸದಾಗಿ ನೇಮಕಗೊಂಡವರನ್ನು ಒಳಗೊಂಡಿದೆ.

<><><><>

ಅಸ್ಸಾಂನ ಗುವಾಹಟಿ, ದಿಬ್ರುಗಢ ಮತ್ತು ಸಿಲ್ಚಾರ್‌ಗಳಲ್ಲಿ ಎಲ್ಲಾ ಅಂಗಡಿಗಳು ಮತ್ತು ವ್ಯಾಪಾರ ಸಂಸ್ಥೆಗಳು ೨೪ ಗಂಟೆಗಳ ಕಾಲ ತೆರೆದಿರಲು ಅಸ್ಸಾಂ ಸರ್ಕಾರ ನಿರ್ಧರಿಸಿದೆ. ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಮುಖ್ಯಮಂತ್ರಿ ಹಿಮಂತ್ ಬಿಸ್ವಾ ಸರ್ಮಾ, ರಾಜಧಾನಿ ಮತ್ತು ರಾಜ್ಯದ ಎರಡು ಪ್ರಮುಖ ಪಟ್ಟಣಗಳಲ್ಲಿ ಮದ್ಯದಂಗಡಿಗಳನ್ನು ಹೊರತುಪಡಿಸಿ ಇತರ ಅಂಗಡಿಗಳು ಮತ್ತು ವ್ಯಾಪಾರ ಸಂಸ್ಥೆಗಳು ದಿನದ ೨೪ ಗಂಟೆಗಳ ಕಾಲ ಕಾರ್ಯನಿರ್ವಹಿಸಲು ರಾಜ್ಯ ಸಚಿವ ಸಂಪುಟ ಅನುಮೋದನೆ ನೀಡಿದೆ ಎಂದು ಹೇಳಿದರು. ಇತರ ಪಟ್ಟಣಗಳಲ್ಲಿ, ಎಲ್ಲಾ ಅಂಗಡಿಗಳು ಬೆಳಗಿನ ಜಾವ ೨ ಗಂಟೆಯವರೆಗೆ ತೆರೆದಿರಲು

ಅವಕಾಶವಿರುತ್ತದೆ, ಆದರೆ ಗ್ರಾಮೀಣ ಪ್ರದೇಶಗಳಲ್ಲಿ ಈ ಮಿತಿ ರಾತ್ರಿ ೧೧ ಗಂಟೆಯಾಗಿರುತ್ತದೆ. ಆದಾಗ್ಯೂ, ಕಾರ್ಮಿಕರು ಗರಿಷ್ಠ ಒಂಬತ್ತು ಗಂಟೆಗಳ ಕಾಲ ಕೆಲಸ ಮಾಡುತ್ತಾರೆ. ಆದ್ದರಿಂದ, ಯಾರಾದರೂ ೨೪ ಗಂಟೆಗಳ ಕಾಲ ಕಾರ್ಯನಿರ್ವಹಿಸಲು ಬಯಸಿದರೆ ಮೂರು ಪಾಳಿಗಳಿರಬೇಕು ಎಂದು ಹೇಳಿದ್ದಾರೆ.

<><><>

ಬೆಂಗಳೂರಿನ ಚನ್ನೇನಹಳ್ಳಿಯ ಜನಸೇವಾ ವಿದ್ಯಾ ಕೇಂದ್ರದಲ್ಲಿ ಆರಂಭವಾಗಿರುವ ರಾಷ್ಟ್ರೀಯ ಸ್ವಯಂ ಸೇವಕ ಸಂಘ ಆರ್‌ಎಸ್‌ಎಸ್‌ನ ಮೂರು ದಿನಗಳ ಅಖಿಲ ಭಾರತೀಯ ಪ್ರತಿನಿಧಿ ಸಭೆಯನ್ನು ಇಂದು ಆರ್‌ಎಸ್‌ಎಸ್‌ನ ಸರಸಂಘ ಚಾಲಕ ಡಾ.ಮೋಹನ್ ಭಾಗವತ್ ಮತ್ತು ಕಾರ್ಯದರ್ಶಿ ದತ್ತಾತ್ರೇಯ ಹೊಸಬಾಳೆ ಉದ್ಘಾಟಿಸಿದರು. ಮೂರು ದಿನಗಳ ಸಮಾವೇಶದಲ್ಲಿ ಹಿಂದೂ ಜಾಗೃತಿ ಸೇರಿದಂತೆ ಪ್ರಸ್ತುತ ದೇಶದ ಸನ್ನಿವೇಶಗಳ ಕುರಿತು ಚರ್ಚೆ ನಡೆಯಲಿದೆ. ಇದೇ ವೇಳೆ, ಈ ವರ್ಷದಲ್ಲಿ ಯೋಜಿಸಲಾಗಿರುವ ವಿವಿಧ ಕಾರ್ಯಕ್ರಮಗಳು ಹಾಗೂ ಅಭಿಯಾನಗಳಿಗೆ ಒಂದು ಚೌಕಟ್ಟನ್ನು ಸಿದ್ಧಪಡಿಸಲಿದೆ. ಇದರ ಜೊತೆಗೆ ಈ ಬಾರಿಯ ವಿಜಯದಶಮಿಯಂದು ಆರ್‌ಎಸ್‌ಎಸ್ ಸ್ಥಾಪನೆಗೊಂಡು ನೂರು ವರ್ಷ ಪೂರೈಸಲಿದ್ದು, ಶತಮಾನೋತ್ಸವ ವೇಳೆಗೆ ಪೂರ್ಣಗೊಳಿಸಲು ಯೋಜಿಸಿದ್ದ ಕಾರ್ಯಕ್ರಮಗಳ ಈವರೆಗಿನ ಪ್ರಗತಿಯ ಪರಿಶೀಲನೆಯೂ ನಡೆಯಲಿದೆ. ಉದ್ಘಾಟನಾ ಕಾರ್ಯಕ್ರಮದ ವೇಳೆ ಮೂರು ದಿನಗಳ ಸಮಾವೇಶದ ಕುರಿತು ಮಾಹಿತಿ ನೀಡಿದ ಆರ್‌ಎಸ್‌ಎಸ್ ಸಹಕಾರ್ಯದರ್ಶಿ ಮುಕುಂದ್ ಜಿ, ನಗರ ಪ್ರದೇಶಗಳಲ್ಲಿ ೧೦ ಸಾವಿರ ಆರ್‌ಎಸ್‌ಎಸ್ ಶಾಖೆಗಳ ಸಂಖ್ಯೆ ಏರಿಕೆ ಕಂಡಿದ್ದು, ಗ್ರಾಮೀಣ ಪ್ರದೇಶದಲ್ಲಿ ೩ ಸಾವಿರ ಶಾಖೆಗಳು ಸ್ಥಾಪನೆಗೊಂಡಿವೆ. ೯೦ ಸಾವಿರ ಸೇವಾ ಉದ್ದೇಶದ ಚಟುವಟಿಕೆಗಳನ್ನು ನಿರ್ವಹಿಸುತ್ತಿದೆ ಎಂದು ಹೇಳಿದರು.

<><><>

ಲಂಡನ್‌ನ ಹೀಥ್ರೂ ವಿಮಾನ ನಿಲ್ದಾಣದ ವಿದ್ಯುತ್ ಉಪಕೇಂದ್ರದಲ್ಲಿ ಭಾರಿ ಬೆಂಕಿ ಕಾಣಿಸಿಕೊಂಡ ಪರಿಣಾಮ ವಿಮಾನ ನಿಲ್ದಾಣವನ್ನು ೨೪ ಗಂಟೆಗಳ ಕಾಲ ಮುಚ್ಚಲಾಗಿದೆ. ವಿದ್ಯುತ್ ಅವಘಡದಿಂದ ಗಮನಾರ್ಹ ವಿದ್ಯುತ್ ಕಡಿತಕ್ಕೆ ಕಾರಣವಾಗಿದ್ದು, ೧೬ ಸಾವಿರಕ್ಕೂ ಹೆಚ್ಚು ಮನೆಗಳಿಗೆ ವಿದ್ಯುತ್ ಸಂಪರ್ಕ ಕಡಿತಗೊಂಡಿದೆ. ಇಂದು ಬೆಳಿಗ್ಗೆ ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಲಂಡನ್ ವಿಮಾನ ನಿಲ್ದಾಣ ಪ್ರಾಧಿಕಾರ, ಪ್ರಯಾಣಿಕರು ಪ್ರಯಾಣಿಸದಂತೆ ಮತ್ತು ಹೆಚ್ಚಿನ ವಿವರಗಳಿಗಾಗಿ ತಮ್ಮ ವಿಮಾನಯಾನ ಸಂಸ್ಥೆಗಳನ್ನು ಸಂಪರ್ಕಿಸುವಂತೆ ಸೂಚಿಸಿದೆ.

<><><>

ಭಾರತ ಗಣನೀಯವಾಗಿ ಸುಂಕವನ್ನು ಕಡಿತಗೊಳಿಸುವ ನಿರೀಕ್ಷೆ ಇದೆ ಎಂದು ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಿಳಿಸಿದ್ದಾರೆ. ಸುದ್ದಿ ಸಂಸ್ಥೆಯೊಂದಕ್ಕೆ ನೀಡಿದ ಸಂದರ್ಶನದಲ್ಲಿ ಅವರು, ಭಾರತದೊಂದಿಗೆ ಉತ್ತಮ ಸಂಬಂಧ ಹೊಂದಲಾಗಿದೆ ಎಂದು ಹೇಳಿದ್ದಾರೆ. ಭಾರತ-ಮಧ್ಯಪ್ರಾಚ್ಯ,

ಯುರೋಪ್ ಆರ್ಥಿಕ ಕಾರಿಡಾರ್ ಕುರಿತ ಪ್ರಶ್ನೆಗೆ ಉತ್ತರಿಸಿದ ಅವರು, ಈ ರಾಷ್ಟ್ರಗಳ ಸಹಕಾರ, ಅಮೆರಿಕಾಗೆ ಹಾನಿಯುಂಟು ಮಾಡುವ ಅನ್ಯಾಯದ ವ್ಯಾಪಾರ ಅಭ್ಯಾಸಗಳನ್ನು ಉತ್ತೇಜಿಸುವ ರಾಷ್ಟ್ರಗಳನ್ನು ಎದುರಿಸಲು ಸಹಕಾರಿಯಾಗಲಿದೆ ಎಂದರು.

<><><>

ಇಸ್ರೇಲ್‌ನಲ್ಲಿ, ದೇಶದ ಆಂತರಿಕ ಭದ್ರತಾ ಸೇವೆ ಶಿನ್ ಬೆಟ್‌ನ ಮುಖ್ಯಸ್ಥರಾದ ರೊನೆನ್ ಬಾರ್ ಅವರನ್ನು ವಜಾಗೊಳಿಸಲು ಸಚಿವ ಸಂಪುಟ ಸರ್ವಾನುಮತದಿಂದ ಮತ ಚಲಾಯಿಸಿದೆ. ಇಸ್ರೇಲ್ ಇತಿಹಾಸದಲ್ಲಿ ಸರ್ಕಾರವೊಂದು ದೇಶೀಯ ಭದ್ರತಾ ಸಂಸ್ಥೆಯ ಮುಖ್ಯಸ್ಥರನ್ನು ವಜಾಗೊಳಿಸಿದ್ದು ಇದೇ ಮೊದಲಾಗಿದೆ.

<><><>

ಗುಜರಾತ್‌ನ ಅಹಮದಾಬಾದ್‌ನಲ್ಲಿರುವ ನರನ್‌ಪುರ ಕ್ರೀಡಾ ಸಂಕೀರ್ಣದಲ್ಲಿ ೧೧ನೇ ಏಷ್ಯನ್ ಈಜು ಚಾಂಪಿಯನ್‌ಶಿಪ್ ಆಯೋಜಿಸಲು ಭಾರತ ಸರ್ಕಾರ ಸಜ್ಜಾಗುತ್ತಿದೆ. ಚಾಂಪಿಯನ್‌ಶಿಪ್ ಆಯೋಜಿಸಲು ಗುಜರಾತ್ ಸರ್ಕಾರ ಮತ್ತು ಏಷ್ಯಾ ಅಕ್ವಾಟಿಕ್ಸ್ ಸಂಸ್ಥೆಯಿಂದ ತಾತ್ವಿಕ ಅನುಮೋದನೆಯನ್ನು ಪಡೆಯಲಾಗಿದೆ ಎಂದು ಭಾರತೀಯ ಈಜು ಒಕ್ಕೂಟ ಘೋಷಿಸಿದೆ. ಈಜು, ಡೈವಿಂಗ್, ಕಲಾತ್ಮಕ ಈಜು ಮತ್ತು ವಾಟರ್ ಪೋಲೊ ಸ್ಪರ್ಧೆಗಳನ್ನು ಹೊಂದಿರಲಿರುವ ಈ ಚಾಂಪಿಯನ್‌ಶಿಪ್, ಅಕ್ಟೋಬರ್ ೧ ರಿಂದ ೧೫ ರವರೆಗೆ ನಡೆಯಲಿದೆ.

<><><>

ಚೆನ್ನೈನಲ್ಲಿಂದು ನಡೆಯಲಿರುವ ಎಸ್‌ಆರ್‌ಎಫ್‌ಐ ಇಂಡಿಯಾ ಟೂರ್ ಸ್ಕ್ವಾಷ್ ಟೂರ್ನಿಯ ಫೈನಲ್ ಪಂದ್ಯದಲ್ಲಿ ಭಾರತದ ಆಕಾಂಕ್ಷಾ ಸಾಲುಂಖೆ ಮತ್ತು ಭಾರತದವರೇ ಆದ ಅನಾಹತ್ ಸಿಂಗ್ ಮುಖಾಮುಖಿಯಾಗಲಿದ್ದಾರೆ. ಈ ಪಂದ್ಯ ಮಧ್ಯಾಹ್ನ ೨.೩೦ಕ್ಕೆ ಆರಂಭವಾಗಲಿದೆ.

<><><>

ಸ್ವಿಟ್ಜರ್‌ಲ್ಯಾಂಡ್‌ನ ಬಾಸೆಲ್‌ನಲ್ಲಿ ನಡೆಯುತ್ತಿರುವ ಸ್ವಿಸ್ ಓಪನ್ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್‌ನಲ್ಲಿ ಭಾರತದ ಅಗ್ರ ಮಹಿಳಾ ಡಬಲ್ಸ್ ಜೋಡಿ ತ್ರಿಶಾ ಜಾಲಿ ಮತ್ತು ಗಾಯತ್ರಿ ಗೋಪಿಚಂದ್ ಮಹಿಳಾ ಡಬಲ್ಸ್ ವಿಭಾಗದ ಕ್ವಾರ್ಟರ್ ಫೈನಲ್ ಪ್ರವೇಶಿಸಿದ್ದಾರೆ. ಭಾರತದ ಜೋಡಿ, ಜರ್ಮನಿಯ ಅಮೆಲಿ ಲೆಹ್ಮನ್ ಮತ್ತು ಸೆಲಿನ್ ಹಬ್‌ಷ್ ವಿರುದ್ಧ ೨೧-೧೨ ೨೧-೮ ಸೆಟ್‌ಗಳ ಅಂತರದಲ್ಲಿ ಜಯ ಸಾಧಿಸಿ, ಮುಂದಿನ ಹಂತಕ್ಕೆ ಪ್ರವೇಶ ಪಡೆದಿದೆ. ಕ್ವಾಟರ್ ಫೈನಲ್‌ನಲ್ಲಿಂದು ಭಾರತದ ಜೋಡಿ ಚೀನಾದ ಎಂಟನೇ ಶ್ರೇಯಾಂಕದ ಯೆಯುಂಗ್ ಎನ್‌ಗಾ ಟಿಂಗ್ ಮತ್ತು ಯೆಯುಂಗ್ ಪುಯಿ ಲ್ಯಾಮ್ ಅವರನ್ನು ಎದುರಿಸಲಿದ್ದಾರೆ. ಪುರುಷರ ಸಿಂಗಲ್ಸ್‌ನಲ್ಲಿ ಭಾರತದ ಶಂಕರ್ ಸುಬ್ರಮಣಿಯನ್ ಕೂಡ ಕ್ವಾರ್ಟರ್ ಫೈನಲ್‌ಗೆ ಲಗ್ಗೆ ಇಟ್ಟಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>